ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/201/ಇಎಸ್‌ಟಿ(7)/2016 | 6037/2

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 21-02-2017.

**ಸುತ್ತೋಲೆ**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್ / ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ / ಸಿಬ್ಬಂದಿಗಳು ತಮ್ಮ ವೈಯಕ್ತಿಕ ಮನವಿಗಳನ್ನು ಸಮುಚಿತ ಮಾರ್ಗದಲ್ಲಿ ಸಲ್ಲಿಸದೇ ನೇರವಾಗಿ ಮಾನ್ಯ ಮುಖ್ಯಮಂತ್ರಿಯವರು, ಮಾನ್ಯ ಉನ್ನತ ಶಿಕ್ಷಣ ಸಚಿವರು, ವಿವಿಧ ಚುನಾಯಿತ ಪ್ರತಿನಿಧಿಗಳು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಮತ್ತು ಇಲಾಖೆಗೆ ಸಲ್ಲಿಸುತ್ತಿರುವುದು ಕಂಡು ಬಂದಿರುತ್ತದೆ. ಇದು ಕರ್ನಾಟಕ ನಾಗರೀಕ ಸೇವಾ ನಡತೆ (ವರ್ತನೆ) ನಿಯಮಗಳು 1966ರ ನಿಯಮ 3(i)(ii)(iii) ಮತ್ತು 27ರ ಉಲ್ಲಂಘನೆ ಆಗಿರುತ್ತದೆ. ಸರ್ಕಾರಿ ನೌಕರರು ತಮ್ಮ ವೈಯಕ್ತಿಕ ಮನವಿಗಳನ್ನು ಸಮುಚಿತ ಮಾರ್ಗದಲ್ಲಿ ಸಲ್ಲಿಸತಕ್ಕದೆಂದು ಈಗಾಗಲೇ ಹಲವು ಬಾರಿ ತಿಳಿಸಲಾಗಿತ್ತು. ಆದಾಗ್ಯೂ ಅಧಿಕಾರಿ / ಸಿಬ್ಬಂದಿ ವರ್ಗದವರು ತಮ್ಮ ವೈಯಕ್ತಿಕ ಮನವಿಗಳನ್ನು ಸಮುಚಿತ ಮಾರ್ಗದಲ್ಲಿ ಸಲ್ಲಿಸದೇ ಕೆಸಿಎಸ್ ನಡತೆ (ವರ್ತನೆ) ನಿಯಮಗಳು, 1966ನ್ನು ಉಲ್ಲಂಘಿಸಿರುವ ಪ್ರಕರಣಗಳು ಪುನರಾವರ್ತನೆ ಆಗಿರುವುದು ಕಂಡು ಬಂದಿದೆ. ತತ್ಸಂಬಂಧ ತಮ್ಮ ವೈಯಕ್ತಿಕ ಮನವಿಗಳನ್ನು ಕಡ್ಡಾಯವಾಗಿ ಸಮುಚಿತ ಮಾರ್ಗದಲ್ಲಿ ಸಲ್ಲಿಸತಕ್ಕದೆಂದು ತಿಳಿಸಿದೆ. ಇಲ್ಲವಾದಲ್ಲಿ, ಕರ್ನಾಟಕ ಸರ್ಕಾರಿ ನೌಕರರ ನಡತೆ (ವರ್ತನೆ) ನಿಯಮಗಳು, 1966 ನಿಯಮ 3(i)(ii)(iii) ಮತ್ತು 27ರ ಉಲ್ಲಂಘನೆ ಎಂದು ಪರಿಗಣಿಸಿ, ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಗಳು, 1957 ರಡಿಯಲ್ಲಿ / ಕರ್ನಾಟಕ ಖಾಸಗಿ ಶೈಕ್ಷಣಿಕ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮಗಳು, 1978ರನ್ವಯ ಶಿಸ್ತು ಕ್ರಮಕೈಗೊಳ್ಳಲು ಕ್ರಮವಹಿಸಲಾಗುವುದು ಎಂದು ಸೂಚಿಸಿದೆ.

**ನಿರ್ದೇಶಕರು**

**ಗೆ:-**

ತಾಂತ್ರಿಕ ಶಿಕ್ಷಣ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್ / ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

**ಪ್ರತಿ:-**

1. ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಎಲ್ಲಾ ಅಧಿಕಾರಿ / ಸಿಬ್ಬಂದಿ ವರ್ಗದವರಿಗೆ ಮಾಹಿತಿಗಾಗಿ;
2. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು - ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸುವುದು;
3. ನಿರ್ದೇಶಕರ ಆಪ್ತ ಶಾಖೆ;
4. ರಕ್ಷಾ ಕಡತಕ್ಕೆ;
5. ಕಛೇರಿ ಪ್ರತಿ.

D_IL-16